ಅತೀ ಜರೂರು

ಸಂ:ಬಿ9–ನೇಮಕಾತಿ–ವಿವ–5/2015–16

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ) ಇವರ ಕಛೇರಿ,
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು–3, ದಿನಾಂಕ: 21 –03–2016

ಇವರಿಗೆ:

**ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,**
ಬೆಂಗಳೂರು, ಹಾಸನ, ಕೊಡಗು,
ಮಂಗಳೂರು, ಮೈಸೂರು,
ಬಳ್ಳಾರಿ ಮತ್ತು ಕಲಬುರಗಿ.

ವಿಷಯ: ಅರಣ್ಯ ಇಲಾಖೆಯಲ್ಲಿ 248 ಅರಣ್ಯ ವೀಕ್ಷಕರ ಹುದ್ದೆಯನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: ಈ ಕಚೇರಿ ಪ್ರಕಟಣೆ ಸಂಖ್ಯೆ: ಬಿ9–ನೇಮಕಾತಿ–ವಿವ–5/2015–16 ದಿನಾಂಕ: 02–03–2016.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಕಚೇರಿ ಪ್ರಕಟಣೆ ದಿನಾಂಕ: 02–03–2016 ರಲ್ಲಿ ಅರಣ್ಯ ವೀಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ವೃತ್ತವಾರು ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ತಾತ್ಕಾಲಿಕ ಕಾಯುವಿಕೆ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ತಮ್ಮ ಎಲ್ಲಾ ಮೂಲ ದಾಖಲಾತಿಗಳು ಹಾಗೂ ಅದರ ಜೆರಾಕ್ಸ್ ಪ್ರತಿಯೊಂದಿಗೆ ಮತ್ತು ಇತ್ತೀಚಿನ ಎರಡು ಭಾವ ಚಿತ್ರಗಳೊಂದಿಗೆ ಆಯಾ ವೃತ್ತಕ್ಕೆ ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಎದುರು ದಿನಾಂಕ: 28–03–2016 ರಂದು ಪೂರ್ವಾಹ್ನ 10.30 ಗಂಟೆಗೆ ಖುದ್ದಾಗಿ ಹಾಜರಾಗಲು ತಿಳಿಸಲಾಗಿದೆ. ಅದರಂತೆ ಹಾಜರಾಗುವ ಅಭ್ಯರ್ಥಿಗಳ ಮೂಲ ದಾಖಲೆಯನ್ನು ಪಡೆಯುವ ಸಂದರ್ಭದಲ್ಲಿ ಅಧಿಸೂಚನೆಯಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿರುವ ಕಡೆಯ ದಿನಾಂಕ (07–05–2013)ರೊಳಗೆ ಹಾಗೂ ಹೈದರಾಬಾದ್–ಕರ್ನಾಟಕ ಬಳ್ಳಾರಿ ವೃತ್ತದ ಹುದ್ದೆಗೆ ಅರ್ಜಿ ಸಲ್ಲಿಸಲು ಸೂಚಿಸಿರುವ ಕಡೆಯ ದಿನಾಂಕದ (14–07–2015) ಒಳಗೆ ಎಲ್ಲಾ ದಾಖಲಾತಿಗಳನ್ನು ಅಭ್ಯರ್ಥಿಯು ಪಡೆದಿರುವ ಬಗ್ಗೆ ಖಚಿತ ಪಡಿಸಿಕೊಂಡು ಸದರಿ ಮೂಲ ದಾಖಲಾತಿಗಳನ್ನು ಇಲಾಖಾ ವಶ ಪಡೆಯುವುದು. ಹಾಗೂ ಈ ದಾಖಲೆಗಳ ಸ್ವಯಂ ದೃಢೀಕೃತ ಜೆರಾಕ್ಸ್ ಪ್ರತಿಯ ಒಂದು ಸೆಟ್ ಅನ್ನು ಸಹ ಪಡೆದುಕೊಂಡು ಪ್ರತಿ ಅಭ್ಯರ್ಥಿಯ ವೈಯಕ್ತಿಕ ಫೋಲ್ಡರ್ ತಯಾರಿಸಿ ನಿಮ್ಮ ಬಳಿಯಲ್ಲಿಯೇ ಇಟ್ಟುಕೊಳ್ಳುವುದು. ಈ ಸಂಬಂಧಿಸಿದಂತೆ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಕೇಂದ್ರ ಕಚೇರಿಯಿಂದ ಮುಂದಿನ ನಿರ್ದೇಶನ ನೀಡಲಾಗುವುದು.

ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದ ಅರಣ್ಯ ವೀಕ್ಷಕ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ ಹಾಗೂ ಮೂಲ ದಾಖಲೆಗಳ ಸ್ವಯಂ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ ವೃತ್ತ, ಬಳ್ಳಾರಿ ಇವರೇ ನಿರ್ವಹಿಸುವುದು.

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,**
**(ಮುಖ್ಯಸ್ಥರು, ಅರಣ್ಯ ಪಡೆ)**

**ಕರ್ನಾಟಕ ಸರ್ಕಾರ-ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003.**

**ಪ್ರಕಟಣೆ**

**ಅಧಿಸೂಚನೆ ಸಂಖ್ಯೆ: ಬಿ9-ಅವೀ-ನೇಮಕಾತಿ-ವಿವ-5/2012-13 ದಿನಾಂಕ : 18/03/2013 ಮತ್ತು ದಿನಾಂಕ : 07-05-2015.**

**ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ಮುಂದುವರಿದ ಪ್ರಕಟಣೆ.**

**ದಿನಾಂಕ: 21 -03-2016.**

*****

ಕರ್ನಾಟಕ ಅರಣ್ಯ ಇಲಾಖೆಯಲ್ಲಿ 248 ಅರಣ್ಯ ವೀಕ್ಷಕ ಹುದ್ದೆಗಳ ನೇರ ನೇಮಕಾತಿಗೆ ಸಂಬಂದಿಸಿದಂತೆ ದಿನಾಂಕ: 02-03-2016 ರಂದು ಅರಣ್ಯ ವೀಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ವೃತ್ತವಾರು ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ತಾತ್ಕಾಲಿಕ ಕಾಯುವಿಕೆ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಿ ಎಲ್ಲಾ ಮೂಲ ದಾಖಲಾತಿಗಳು, ಸ್ವಯಂ ದೃಢೀಕೃತ ಜೆರಾಕ್ಸ್ ಪ್ರತಿ ಮತ್ತು ಎರಡು ಭಾವಚಿತ್ರಗಳೊಂದಿಗೆ ಆಯಾ ವೃತ್ತಕ್ಕೆ ಸಂಬಂದಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಎದುರು ಹಾಜರಾಗಲು ದಿನಾಂಕ: 28-03-2016 ರಂದು ಪೂರ್ವಾಹ್ನ 10.30 ಗಂಟೆಗೆ ಖುದ್ದಾಗಿ ಹಾಜರಾಗಲು ತಿಳಿಸಲಾಗಿದೆ.

ಅಭ್ಯರ್ಥಿಗಳು ಎಲ್ಲಾ ಮೂಲ ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ (07-05-2013)ರೊಳಗೆ ಪಡೆದಿರುವ ದಾಖಲಾತಿಗಳನ್ನು ಸಲ್ಲಿಸಲು ಸೂಚಿಸಿದೆ. ಹಾಗೂ ಹೈದರಾಬಾದ್-ಕರ್ನಾಟಕ ಬಳ್ಳಾರಿ ವೃತ್ತದ ಹುದ್ದೆಗೆ ಅರ್ಜಿ ಸಲ್ಲಿಸಲು ಸೂಚಿಸಿರುವ ಕಡೆಯ ದಿನಾಂಕದ (14-07-2015) ಒಳಗೆ ಪಡೆದಿರುವ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.

ಮುಂದುವರೆದು, ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ ಆಯ್ಕೆಯಾಗಿರುವ 17 ಅರಣ್ಯ ವೀಕ್ಷಕ ಅಭ್ಯರ್ಥಿಗಳು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ ವೃತ್ತ, ಬಳ್ಳಾರಿ ಇವರಿಗೆ ಮೇಲೆ ತಿಳಿಸಿರುವಂತೆ ದಾಖಲಾತಿಗಳನ್ನು ದಿನಾಂಕ: 28-03-2016 ರಂದು ಸಲ್ಲಿಸುವಂತೆ ತಿಳಿಸಲಾಗಿದೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,
(ಮುಖ್ಯಸ್ಥರು, ಅರಣ್ಯ ಪಡೆ)